ಅಧ್ಯಕ್ಷರು.—ಹಕ್ಕುಚ್ಯುತಿ ನೋಟಿಸು ಕೊಡಿ,

ಶ್ರೀ ಸಿ. ಬೈರೇಗೌಡ.—ಅಯಿತು ಕೊಡುತ್ತೇನೆ.

ಅಧ್ಯಕ್ಷರು.—ಕೊಡಿ.

ಶಾಸನ ರಚನಾ ಕಾರ್ಯ ಕಲಾಪಗಳು

೧೯೯೦ನೇ ಇಸವಿಯ ಕರ್ನಾಟಕ ಜಿಲ್ಲಾ ಪರಿಷತ್ತು ತಾಲ್ಲೂಕು ಪಂಚಾಯತ್ ಸಮಿತಿ ಮಂಡಲ್ ಪಂಚಾಯತ್ ಮತ್ತು ನ್ಯಾಯ ಪಂಚಾಯತ್ (ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ. ಬಸವಲಿಂಗಪ್ಪ(ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಸಚಿವರು).—ಮಾನ್ಯ ಅಧ್ಯಕ್ಷರೇ ನಾನು ''೧೯೯೦ರ ಕರ್ನಾಟಕ ಜಿಲ್ಲಾ ಪರಿಷತ್ತು ತಾಲ್ಲೂಕು ಪಂಚಾಯತ್ ಸಮಿತಿ ಮಂಡಲ್ ಪಂಚಾಯತ್ ಮತ್ತು ನ್ಯಾಯ ಪಂಚಾಯತ್ (ತಿದ್ದುಪಡಿ) ಮಸೂದೆಯನ್ನು ಮಂಡಿಸಲು ಅನುಮತಿ ನೀಡಬೇಕೆಂದು ಕೇಳಿಕೊಳ್ಳುತ್ತೇನೆ.''

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೯೦ರ ಕರ್ನಾಟಕ ಜಿಲ್ಲಾ ಪರಿಷತ್ತು ತಾಲ್ಲೂಕು ಪಂಚಾಯತ್ ಸಮಿತಿಗಳ ಮಂಡಲ್ ಪಂಚಾಯತ್ ಮತ್ತು ನ್ಯಾಯ ಪಂಚಾಯತ್ (ತಿದ್ದುಪಡಿ) ಮಸೂದೆಯನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ. ಬಸವಲಿಂಗಪ್ಪ (ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಸಚಿವರು) —ಮಾನ್ಯ ಅಧ್ಯಕ್ಷರೇ ''೧೯೯೦ರ ಕರ್ನಾಟಕ ಜಿಲ್ಲಾ ಪರಿಷತ್ತು ತಾಲ್ಲೂಕು ಪಂಚಾಯತ್ ಸಮಿತಿಗಳು ಮತ್ತು ನ್ಯಾಯ ಪಂಚಾಯತ್ ಸಮಿತಿಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ''.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ *

೧೯೯೦ನೇ ಇಸವಿಯ ಕರ್ನಾಟಕ ಜಿಲ್ಲಾ ಪರಿಷತ್ತು ತಾಲ್ಲೂಕು ಪಂಚಾಯತ್ ಸಮಿತಿ ಮಂಡಲ್ ಪಂಚಾಯತ್ ಮತ್ತು ನ್ಯಾಯ ಪಂಚಾಯತ್ (ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಬಿ. ಬಸವಲಿಂಗಪ್ಪ (ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ಯ ಸಚಿವರು).—ಮಾನ್ಯ ಅಧ್ಯಕ್ಷರೇ ನಾನು ೧೯೯೦ನೇ ಇಸವಿಯ ಕರ್ನಾಟಕ ಜಿಲ್ಲಾ ಪರಿಷತ್ತು ತಾಲ್ಲೂಕು ಪಂಚಾಯತ್ ಸಮಿತಿ ಮಂಡಲ್ ಪಂಚಾಯತ್ ಮತ್ತು ನ್ಯಾಯ ಪಂಚಾಯತ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು

x x x

ಶ್ರೀ ಬಿ. ಬಸವಲಿಂಗಪ್ಪ.—ಮಾನ್ಯ ಅಧ್ಯಕ್ಷರೇ, ಈಗ ನಮ್ಮ ಸರ್ಕಾರದವರು ಈಗ ಪರಿವರ್ತನೆ ಪಂಚಾಯತ್‌ಗಳ ಚುನಾವಣೆ ಬಗ್ಗೆ ಒಂದು ನಿಲುವು ತೆಗೆದುಕೊಂಡಿದ್ದಾರೆ. ಇದು ಮಾನ್ಯ ಸದಸ್ಯರೆಲ್ಲರಿಗೂ ಗೊತ್ತು. ನಿನ್ನೆಯ ದಿವಸ ಸಹ ಇದೇ ರೀತಿಯ ಬಿಲ್ ಒಂದನ್ನು ತಾವು ಒಪ್ಪಿ ಕೊಂಡಿದ್ದೀರಿ ಹಾಗೂ ಅದನ್ನು ಪಾಸ್ ಮಾಡಿ ಕೊಟ್ಟಿದ್ದೀರಿ. ಅದೇ ರೀತಿ ಈ ಒಂದು ಆಕ್ಟ್ ಕೆಳಗೆ ಈ ಒಂದೂ ತಿದ್ದುಪಡಿ ಬೇಕಾಗಿದೆ. ತಾವು ದಯವಾಡಿ ತಾವು ಇದನ್ನು ಒಪ್ಪಬೇಕೆಂದು ನಾನು ಕೇಳಿಕೊಳ್ಳುತ್ತೇನೆ.

---

* Annexure